ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಮಂಗಳವಾರ, ದಿನಾಂಕ: 2ನೇ ಫೆಬ್ರವರಿ, 2021

ಅನ್ನ ಭಾಗ್ಯ ಯೋಜನೆಯ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

224(238) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಅನ್ನಭಾಗ್ಯ ಯೋಜನೆಯಲ್ಲಿ ಕಳೆದ 6 ತಿಂಗಳಿನಲ್ಲಿ ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡುದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಎ.ಪಿ.ಎಲ್., ಬಿ.ಪಿ.ಎಲ್. ಮತ್ತು ಅಂತ್ಯೋದಯ ಕಾರ್ಡುಗಳಿವೆ ; ಎ.ಪಿ.ಎಲ್., ಬಿ.ಪಿ.ಎಲ್. ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣ ಎಷ್ಟು ; ರಾಜ್ಯದಲ್ಲಿರುವ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತದೆ ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯ ಬೆಲೆ ಅಂಗಡಿಯ ಮಾಲೀಕರು ವಿತರಿಸದೆ ಬಡವರಿಗೆ ವಿತರಿಸಿದೆಯೆಂದು ಸರ್ಕಾರಕ್ಕೆ ಸುಳ್ಳು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯಾಗಿ ವಂಚಿಸುತ್ತಿರುವ ನ್ಯಾಯ ಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕಳೆದ 6 ತಿಂಗಳಿನಲ್ಲಿ ಈ ರೀತಿಯ ಎಷ್ಟು ಪ್ರಕರಣಗಳು ದಾಖಲಾಗಿವೆ;

(ಈ) ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಸರ್ಕಾರವು ಕಳೆದ 6 ತಿಂಗಳಿನಲ್ಲಿ ಎಷ್ಟು ವೆಚ್ಚ ಮಾಡಿದೆ ? (ತಿಂಗಳವಾರು ವಿವರ ನೀಡುವುದು)